## ಕರ್ನಾಟಕ ಸರ್ಕಾರದ ನಡವಳಿಗಳು

## ಜಲ ಸಂಪನ್ಮೂಲ ಇಲಾಖೆ

ವಿಷಯ:- ಚಿತ್ರದುರ್ಗ ತಾಲ್ಲೂಕಿನ ಭರಮಸಾಗರ ಹೋಬಳಿಯ 38 ಹಾಗೂ ದಾವಣಗೆರೆ ತಾಲ್ಲೂಕಿನ 01 ಕೆರೆ ಸೇರಿದಂತೆ ಒಟ್ಟು 39 ಕೆರೆಗಳಿಗೆ ತುಂಗಭದ್ರಾ ನದಿಯಿಂದ ನೀರನ್ನೆತ್ತಿ ಕೆರೆ ತುಂಬಿಸುವ ಅಂದಾಜು ಮೊತ್ತ ರೂ.522.11 ಕೋಟಿಗಳ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:-1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ:ಕನೀನಿ/ತಾಂತ್ರಿಕ/ಭದ್ರಾ/109/2018-19/6953 ದಿನಾಂಕ:20.02.2019.

2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ:ಕನೀನಿ/ತಾಂತ್ರಿಕ/ಭದ್ರಾ/109/2018-19/7774 ದಿನಾಂಕ:20.03.2019 ಮತ್ತು ಪತ್ರ ಸಂಖ್ಯೆ:2359 ದಿನಾಂಕ:02.08.2019.

---***---

**ಪ್ರಸ್ತಾವನೆ:**

ಮೇಲೆ ಓದಲಾದ (1) ಮತ್ತು (2) ರ ಪತ್ರಗಳಲ್ಲಿ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ, ಬೆಂಗಳೂರು ಇವರು, ಚಿತ್ರದುರ್ಗ ತಾಲ್ಲೂಕಿನ ಭರಮಸಾಗರ ಹೋಬಳಿಯ 38 ಹಾಗೂ ದಾವಣಗೆರೆ ತಾಲ್ಲೂಕಿನ 01 ಕೆರೆ ಸೇರಿದಂತೆ ಒಟ್ಟು 39 ಕೆರೆಗಳಿಗೆ ತುಂಗಭದ್ರಾ ನದಿಯಿಂದ ನೀರನ್ನೆತ್ತಿ ಕೆರೆ ತುಂಬಿಸಿ, ಜನ-ಜಾನುವಾರುಗಳಿಗೆ ಕುಡಿಯುವ ನೀರು ಹಾಗೂ ಅಂತರ್ಜಲ ಅಭಿವೃದ್ಧಿಪಡಿಸಲು ಚಿತ್ರದುರ್ಗ ತಾಲ್ಲೂಕಿನ ಭರಮಸಾಗರ ಹೋಬಳಿಯ 38 ಹಾಗೂ ದಾವಣಗೆರೆ ತಾಲ್ಲೂಕಿನ 01 ಕೆರೆ ಸೇರಿದಂತೆ ಒಟ್ಟು 39 ಕೆರೆಗಳಿಗೆ ತುಂಗಭದ್ರಾ ನದಿಯಿಂದ ನೀರನ್ನೆತ್ತಿ ಕೆರೆ ತುಂಬಿಸುವ ಯೋಜನೆಯನ್ನು ಪ್ರಸ್ತಾಪಿಸಲಾಗಿದೆ ಎಂದು ತಿಳಿಸಿರುತ್ತಾರೆ. ಮುಂದುವರೆದು, ದಿನಾಂಕ:06.12.2018 ರಂದು ಜರುಗಿದ ನಿಗಮದ 45ನೇ ಅಂದಾಜು ಪರಿಶೀಲನಾ ಸಮಿತಿಯ ಸಭೆಯಲ್ಲಿ ಸದರಿ ಯೋಜನೆಯ ವಿವರವಾದ ಯೋಜನಾ ವರದಿಯನ್ನು ಮಂಡಿಸಲಾಗಿ ಸಮಿತಿಯು ತೀರುವಳಿ ನೀಡಿ, ನಿಗಮದ ನಿರ್ದೇಶಕರ ಮಂಡಳಿಯಿಂದ ಅನುಮೋದನೆ ಪಡೆಯಲು ಶಿಫಾರಸ್ಸು ಮಾಡಿರುತ್ತದೆ ಎಂದು ತಿಳಿಸಿರುತ್ತಾರೆ. ಅದರಂತೆ, ಯೋಜನೆಯ ವಿವರವಾದ ಯೋಜನಾ ವರದಿಯನ್ನು, ದಿನಾಂಕ:01.02.2019 ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿಯ 86ನೇ ಸಭೆಯಲ್ಲಿ ಮಂಡಿಸಲಾಗಿದ್ದು, 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಲಾಗಿರುವ ರೂ.522.11 ಕೋಟಿಗಳ ಯೋಜನೆಗೆ ಅನುಮೋದನೆ ನೀಡಿ, ಆಡಳಿತಾತ್ಮಕ ಅನುಮೋದನೆ ನೀಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತದೆ; ಆದ್ದರಿಂದ, ಚಿತ್ರದುರ್ಗ ತಾಲ್ಲೂಕಿನ ಭರಮಸಾಗರ ಹೋಬಳಿಯ 38 ಹಾಗೂ ದಾವಣಗೆರೆ ತಾಲ್ಲೂಕಿನ 01.ಕೆರೆ ಸೇರಿದಂತೆ ಒಟ್ಟು 39 ಕೆರೆಗಳಿಗೆ ತುಂಗಭದ್ರಾ ನದಿಯಿಂದ ನೀರನ್ನೆತ್ತಿ ಕೆರೆ ತುಂಬಿಸುವ 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಲಾಗಿರುವ ರೂ522.11 ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

...2

ಈ ಹಿನ್ನೆಲೆಯಲ್ಲಿ, ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 78 ಎಂಎಂಬಿ 2018, ಬೆಂಗಳೂರು, ದಿನಾಂಕ:07.09.2019.**

ಚಿತ್ರದುರ್ಗ ತಾಲ್ಲೂಕಿನ ಭರಮಸಾಗರ ಹೋಬಳಿಯ 38 ಹಾಗೂ ದಾವಣಗೆರೆ ತಾಲ್ಲೂಕಿನ 01 ಕೆರೆ ಸೇರಿದಂತೆ ಒಟ್ಟು 39 ಕೆರೆಗಳಿಗೆ ತುಂಗಭದ್ರಾ ನದಿಯಿಂದ ನೀರನ್ನೆತ್ತಿ ಕೆರೆ ತುಂಬಿಸುವ ಅಂದಾಜು ಮೊತ್ತ ರೂ.522.11 ಕೋಟಿಗಳ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಮುಂದುವರೆದು, ಒಟ್ಟು ಕಾಮಗಾರಿಗೆ ಟೆಂಡರ್ ಕರೆದು, ಹಂತ ಹಂತವಾಗಿ ಹಣ ಬಿಡುಗಡೆ ಮಾಡುವ ಪ್ರಸ್ತಾವನೆಗೆ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 491 ಆಕೋ-1 2019 ದಿನಾಂಕ:05.09.2019 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಶ್ರೀಹರಿ ಎಸ್.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1)
ಜಲ ಸಂಪನ್ಮೂಲ ಇಲಾಖೆ.

<u>ಪ್ರತಿಯನ್ನು:-</u>

1. ಪ್ರಧಾನ ಮಹಾಲೇಖಾಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
2. ಪ್ರಧಾನ ಮಹಾಲೇಖಾಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
3. ಪ್ರಧಾನ ಮಹಾಲೇಖಾಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ), ಕರ್ನಾಟಕ ಬೆಂಗಳೂರು 01.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಬೆಂಗಳೂರು.
5. ಮುಖ್ಯ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ವಲಯ ಶಿವಮೊಗ್ಗ.
6. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿಗಳು (ಸಚಿವ ಸಂಪುಟ) ಪ್ರಕರಣ ಸಂ:ಸಿ:516/2019 ದಿನಾಂಕ:06.09.2019 ರನ್ವಯ ಕಳುಹಿಸಿದೆ.
7. ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
8. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.